## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀಮತಿ ಗೀತಾ ಶೆಟ್ಟಪ್ಪಾ ಕಾಂಬಳೆ, ಅಧ್ಯಕ್ಷರು, ಕಮತನೂರು ಗ್ರಾಮ ಪಂಚಾಯತಿ, ಹುಕ್ಕೇರಿ ತಾ., ಬೆಳಗಾವಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಮತ್ತು 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ ಇವರ ಪತ್ರ ಸಂಖ್ಯೆ: ಜಿಪಂಬೆ/ಪರಿಷತ್/ವಿವ/ನೇರ/2017-18, ದಿನಾಂಕ 20.09.2017 ಮತ್ತು 16.11.2017
2) ಇದೇ ಸಮಸಂಖ್ಯೆಯ ಕಾರಣ ಕೇಳುವ ನೋಟಿಸ್, ದಿನಾಂಕ 13.12.2017
3) ಶ್ರೀಮತಿ ಗೀತಾ ಶೆಟ್ಟಪ್ಪಾ ಕಾಂಬಳೆ, ಅಧ್ಯಕ್ಷರು, ಕಮತನೂರು ಗ್ರಾಮ ಪಂಚಾಯತಿ, ಹುಕ್ಕೇರಿ ತಾ., ಬೆಳಗಾವಿ ಜಿಲ್ಲೆ ಇವರು ಕಾರಣ ಕೇಳಿ ನೋಟೀಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ, ದಿನಾಂಕ 03.01.2018
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ ಇವರ ವರದಿ ಸಂಖ್ಯೆ: ಜಿಪಂಬೆ/ಪರಿಷತ್/ವಿವ/ನೇರ/2017-18, ದಿನಾಂಕ 28.03.2018
5) ಇದೇ ಸಮಸಂಖ್ಯೆಯ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ, ದಿನಾಂಕ 27.07.2018

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ, ಶ್ರೀಮತಿ ಗೀತಾ ಶೆಟ್ಟಪ್ಪಾ ಕಾಂಬಳೆ, ಅಧ್ಯಕ್ಷರು, ಕಮತನೂರು ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು 2008-09 ನೇ ಸಾಲಿನ ಆಶ್ರಯ ಯೋಜನೆಯ ಫಲಾನುಭವಿಯಾಗಿ ರೂ.39,804/- ಹಾಗೂ 2015-16 ನೇ ಸಾಲಿನಲ್ಲಿ ಅಂಬೇಡ್ಕರ ವಸತಿ ಯೋಜನೆಯ ಫಲಾನುಭವಿಯಾಗಿ 2 ಹಂತದ ಅನುದಾನ ರೂ.74,800/- ಗಳನ್ನು ಪಡೆದಿರುತ್ತಾರೆ. ಹಾಗೂ ಸದರಿಯವರ ಅತ್ತೆಯವರಿಗೂ ಎರಡು ಬಾರಿ ವಸತಿ ಯೋಜನೆಯಡಿ ಮನೆ ನಿರ್ಮಾಣಕ್ಕೆ ಸಹಾಯಧನ ನೀಡಿರುತ್ತಾರೆ. ಆಪಾದಿತರು ಗ್ರಾಮ ಪಂಚಾಯತಿ ಅಧ್ಯಕ್ಷರಾಗಿ ತಮ್ಮ ಅಧಿಕಾರಾವಧಿಯಲ್ಲಿ ಅಧಿಕಾರವನ್ನು ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಮತ್ತು 43(ಎ) ರಡಿ ಕ್ರಮ ಕೈಗೊಂಡು ಗ್ರಾಮ ಪಂಚಾಯತಿ ಅಧ್ಯಕ್ಷ ಮತ್ತು ಸದಸ್ಯ ಸ್ಥಾನದಿಂದ ತೆಗೆದುಹಾಕುವ ಬಗ್ಗೆ ಮುಂದಿನ ಕ್ರಮಕ್ಕಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಳಗಾವಿ ಜಿಲ್ಲಾ ಪಂಚಾಯತಿ ರವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಮತ್ತು 43(ಎ) ರನ್ವಯ ಕ್ರಮ ಜರುಗಿಸಿ, ಗ್ರಾಮ ಪಂಚಾಯತಿ ಅಧ್ಯಕ್ಷ ಮತ್ತು ಸದಸ್ಯ ಸ್ಥಾನದಿಂದ ಏಕೆ ತೆಗೆದು ಹಾಕಬಾರದು ಎಂಬುದರ ಬಗ್ಗೆ ವಿವರಣೆ ನೀಡುವಂತೆ ಸದರಿ ಆಪಾದಿತ ಅಧ್ಯಕ್ಷರಿಗೆ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ (3) ರಲ್ಲಿ ಸದರಿ ಗ್ರಾಮ ಪಂಚಾಯತಿ ಅಧ್ಯಕ್ಷರು ಸರ್ಕಾರದಿಂದ ಜಾರಿಗೊಳಿಸಲಾಗಿದ್ದ ಕಾರಣ ಕೇಳಿ ನೋಟಿಸಿಗೆ ಕೆಳಗಿನಂತೆ ಉತ್ತರವನ್ನು ಸಲ್ಲಿಸಿರುತ್ತಾರೆ.

1. ವಸತಿ ಯೋಜನೆಯಡಿ ಗ್ರಾಮ ಸಭೆಯಲ್ಲಿ ಗ್ರಾಮಸ್ಥರು ನಾವು ವಾಸಿಸುವ ಮನೆಯು ಪೂರ್ಣ ಶಿಥಿಲಗೊಂಡಿದ್ದು ಗ್ರಾಮ ಪಂಚಾಯತ ಒಬ್ಬ ಪ್ರತಿನಿಧಿಯಾಗಿ ಶಿಥಿಲಗೊಂಡ ಮನೆಯಲ್ಲಿ ಇರುವುದು ಯೋಗ್ಯವಲ್ಲ ಅಂತಾ ಗ್ರಾಮಸ್ಥರು ಹಾಗೂ ಗ್ರಾಮ ಪಂಚಾಯತ ಸದಸ್ಯರು ಗ್ರಾಮ ಸಭೆಯಲ್ಲಿ ಆಯ್ಕೆ ಮಾಡಿರುತ್ತಾರೆ.
2. ಕಾರ್ಯನಿರ್ವಾಹಕ ಅಧಿಕಾರಿಗಳ ಆದೇಶದಂತೆ ಮನೆ ನಿರ್ಮಾಣ ಸ್ಥಗಿತಗೊಳಿಸಿ, ದಿನಾಂಕ:-14/09/2017 ರಂದು ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕು ಸಂಕೇಶ್ವರ ಇವರಲ್ಲಿ ರೂ.20,000/- ಗಳನ್ನು ಡಿ.ಡಿ.ಮುಖಾಂತರ ಮಾನ್ಯ ವ್ಯವಸ್ಥಾಪಕ ನಿರ್ದೇಶಕರು ರಾಜೀವ ಗಾಂಧಿ ವಸತಿ ನಿಗಮ ಬೆಂಗಳೂರು ಇವರ ಹಸರಿಗೆ ಪಾವತಿಸಿರುತ್ತೇನೆ. ಉಳಿದ ಹಣವನ್ನು ಕಂತುಗಳಲ್ಲಿ ಪಾವತಿಸುವುದಾಗಿ ತಿಳಿಸಿರುತ್ತಾರೆ.

ದಿನಾಂಕ 02.03.2018ರಂದು ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ಪ್ರಕರಣದ ವಿಚಾರಣೆ ಜರುಗಿಸಲಾಗಿ, ಪ್ರಕರಣದ ಬಗ್ಗೆ ಸ್ಥಳ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತಿಳಿಸಲಾಗಿತ್ತು. ಅದರಂತೆ ಮೇಲೆ ಓದಲಾದ (4) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಳಗಾವಿ ಜಿಲ್ಲಾ ಪಂಚಾಯತಿಯವರು ಕೆಳಗಿನಂತೆ ವರದಿ ಸಲ್ಲಿಸಿರುತ್ತಾರೆ.

1. ಅಧ್ಯಕ್ಷರಾದ ಶ್ರೀಮತಿ ಗೀತಾ ಶೆಟ್ಟಪ್ಪಾ ಕಾಂಬಳೆ ಇವರು 2008-09ನೇ ಸಾಲಿನಲ್ಲಿ ಆಶ್ರಯ ಯೋಜನೆಯಡಿಯಲ್ಲಿ ಪಡೆದ ಮನೆಯು ಪೂರ್ತಿಯಾಗಿ ಶಿಥಿಲಗೊಂಡಿರುವುದಿಲ್ಲ. ಹಾಗೂ ಪ್ರಕೃತಿ ವಿಕೋಪಕ್ಕೆ ತುತ್ತಾಗಿ ಹಾಳಾಗದೇ ಇರುವುದು ಕಂಡುಬರುತ್ತದೆ.
2. ಸದರಿ ಅಧ್ಯಕ್ಷರು ಪುನಃ 2015-16ನೇ ಸಾಲಿಗೆ ಮನೆ ಪಡೆದಿರುವುದು ನಿಯಮಬಾಹಿರವಾಗಿರುತ್ತದೆ.
3. ಈ ಎರಡು ಮನೆಗಳನ್ನು ಉಪನೋಂದಣಾಧಿಕಾರಿ ಕಛೇರಿಯಲ್ಲಿ ನೊಂದಣಿ ಮಾಡಿಸಿರುವುದಿಲ್ಲ ಹಾಗೂ ಗ್ರಾಮ ಪಂಚಾಯತಿ ಆಸ್ತಿ ರಿಜಿಸ್ಟರಿನಲ್ಲಿ ದಾಖಲು ಮಾಡಿಸಿರುವುದಿಲ್ಲ. ಇದರಿಂದ ಗ್ರಾಮ ಪಂಚಾಯತಿಗೆ ಪಡೆದ ಅನುದಾನ ಹಿಂದಿರುಗಿಸದೇ ವಂಚಿಸಿರುವುದಾಗಿ ವರದಿ ಸಲ್ಲಿಸಿರುತ್ತಾರೆ.
4. ನಿಯಮಗಳನುಸಾರ 20 ವರ್ಷಗಳ ಹಳೆ ಮನೆ ಇದ್ದು, ಶಿಥಿಲಾವಸ್ಥೆಯಲ್ಲಿದ್ದರೆ ಅಥವಾ ಪ್ರಕೃತಿ ವಿಕೋಪಕ್ಕೆ ತುತ್ತಾಗಿ ಹಾಳಾಗಿದ್ದರೆ ಸಂಬಂಧಪಟ್ಟ ಇಲಾಖೆಯಿಂದ ಧೃಢೀಕರಣ ಪಡೆದು ವಸತಿ ಯೋಜನೆಯಡಿ ಮನೆಯನ್ನು ಪಡೆಯಬಹುದಾಗಿರುತ್ತದೆ.

ಮೇಲೆ ಓದಲಾದ (4) ರನ್ವಯ ದಿನಾಂಕ 04.08.2018ರಂದು ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ಪ್ರಕರಣದ ವಿಚಾರಣೆ ಜರುಗಿಸಲಾಗಿದೆ. ಎಲ್ಲರ ಅಹವಾಲನ್ನು ಕೇಳಲಾಗಿ, ಆಪಾದಿತ ಅಧ್ಯಕ್ಷರಾದ ಶ್ರೀಮತಿ ಗೀತಾ ಶೆಟ್ಟಪ್ಪಾ ಕಾಂಬಳೆ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಬೆಳಗಾವಿ ಜಿಲ್ಲಾ ಪಂಚಾಯತಿಯ ಸಹಾಯಕ ಕಾರ್ಯದರ್ಶಿಯವರು ಹಾಜರಿರುತ್ತಾರೆ. ಆಪಾದಿತ ಅಧ್ಯಕ್ಷರು 2008-09ರಲ್ಲಿ ಮಂಜೂರಾದ ಮನೆ ತುಂಬ ಶಿಥಿಲಗೊಂಡಿದ್ದ ಕಾರಣ ಗ್ರಾಮಸಭೆಯಲ್ಲಿ ಆಯ್ಕೆ ಮಾಡಿ 2015-16ರಲ್ಲಿ ಮತ್ತೊಂದು ಮನೆ ನೀಡಲಾಯಿತ್ತು ಎಂದು ತಿಳಿಸಿದರು.

ಲಭ್ಯವಿರುವ ಎಲ್ಲಾ ದಾಖಲಾತಿಗಳು, ಆಪಾದಿತರ ಲಿಖಿತ ಹಾಗೂ ಮೌಖಿಕ ಹೇಳಿಕೆಗಳನ್ನು ಪರಿಶೀಲಿಸಲಾಗಿ, ಎದುರುದಾರರು 2008-09 ರಲ್ಲಿ ಮಂಜೂರಾದ ಮನೆ ತುಂಬ ಶಿಥಿಲವಾಗಿದ್ದ ಕಾರಣ ಗ್ರಾಮಸಭೆಯಲ್ಲಿ ಆಯ್ಕೆ ಮಾಡಿ 2015-16ರಲ್ಲಿ ಮತ್ತೊಂದು ಮನೆ ನೀಡಲಾಯಿತು ಎಂದು ತಿಳಿಸಿರುತ್ತಾರೆ. ಪ್ರಕರಣದ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ವರದಿ ಸಲ್ಲಿಸಿದ್ದು, ವಸತಿ ಯೋಜನೆಯ ಮಾರ್ಗಸೂಚಿಗಳನ್ವಯ ಮನೆ ಪಡೆದು ಕನಿಷ್ಠ 20 ವರ್ಷಗಳಾಗಿ ಶಿಥಿಲಗೊಂಡಿದ್ದಲ್ಲಿ ಮಾತ್ರ ಪಂಚಾಯತ್ ರಾಜ್ ಇಂಜಿನಿಯರ ಉಪವಿಭಾಗ ರವರಿಂದ ಧೃಢೀಕರಣ ಪಡೆದು ಮತ್ತೊಮ್ಮೆ ಮನೆ ಪಡೆಯಬಹುದಾಗಿದ್ದು, ಆಪಾದಿತರು ಎದುರುದಾರರು 2008-09ರಲ್ಲಿ ಮನೆ ಪಡೆದು ಶಿಥಿಲಗೊಳ್ಳದಿದ್ದರೂ ಪುನಃ 2015-16ರಲ್ಲಿ ಮತ್ತೊಮ್ಮೆ ನಿಯಮಬಾಹಿರವಾಗಿ ವಸತಿ ಯೋಜನೆಯಡಿ ಸಹಾಯಧನ ಪಡೆದು ದುರ್ನಡತೆ ಎಸಗಿರುವುದು ಕಂಡುಬರುತ್ತದೆ ಎಂದು ವರದಿ ಸಲ್ಲಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಎದುರುದಾರರಾದ ಶ್ರೀಮತಿ ಗೀತಾ ಶೆಟ್ಟಪ್ಪ ಕಾಂಬಳೆ, ಅಧ್ಯಕ್ಷರು, ಕಮತನೂರ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43ಎ ರನ್ವಯ ಕಮತನೂರ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ನಿರ್ಣಯಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1119 ಗ್ರಾಪಂಅ 2017 ಬೆಂಗಳೂರು, ದಿನಾಂಕ: 07.09.2018**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಗೀತಾ ಶೆಟ್ಟಪ್ಪಾ ಕಾಂಬಳೆ, ಅಧ್ಯಕ್ಷರು, ಕಮತನೂರು ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ಸ್ವತಃ ಫಲಾನುಭವಿಯಾಗಿ ವಸತಿ ಯೋಜನೆಯಡಿ ಮನೆ ನಿರ್ಮಾಣಕ್ಕಾಗಿ ನಿಯಮಬಾಹಿರವಾಗಿ 2008-09 ಮತ್ತು 2015-16ನೇ ಸಾಲಿನಲ್ಲಿ ಎರಡು ಬಾರಿ ಸಹಾಯಧನ ಪಡೆದುಕೊಂಡು ದುರ್ನಡತೆ ಎಸಗಿರುವ ಹಿನ್ನೆಲೆಯಲ್ಲಿ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43ಎ & 48(4) ರನ್ವಯ ಕ್ರಮ ಜರುಗಿಸಿ, ಶ್ರೀಮತಿ ಗೀತಾ ಶೆಟ್ಟಪ್ಪಾ ಕಾಂಬಳೆ, ಅಧ್ಯಕ್ಷರು, ಕಮತನೂರು ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರನ್ನು ಬೆಳಗಾವಿ ಜಿಲ್ಲೆ ಹುಕ್ಕೇರಿ ತಾಲ್ಲೂಕು ಕಮತನೂರ ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ, ಅವರ ಸದಸ್ಯತ್ವನ್ನು ರದ್ದುಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:

1) ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ.
3) ಕಾರ್ಯದರ್ಶಿ, ಕರ್ನಾಟಕ ರಾಜ್ಯ ಚುನಾವಣಾ ಆಯೋಗ, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು.
4) ಕಾರ್ಯನಿರ್ವಾಹಕ ಅಧಿಕಾರಿ, ಹುಕ್ಕೇರಿ ತಾಲ್ಲೂಕು ಪಂಚಾಯತಿ, ಹುಕ್ಕೇರಿ, ಬೆಳಗಾವಿ ಜಿಲ್ಲೆ.
   (ಸದರಿಯವರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸ್ವೀಕೃತಿಯನ್ನು ಸರ್ಕಾರಕ್ಕೆ ಕಳುಹಿಸಲು ತಿಳಿಸಿದೆ)
5) ಶ್ರೀಮತಿ ಗೀತಾ ಶೆಟ್ಟಪ್ಪಾ ಕಾಂಬಳೆ, ಅಧ್ಯಕ್ಷರು, ಕಮತನೂರು ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ.
6) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಮತನೂರು ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ.
7) ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ.
2) ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.